# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್-102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು-79.

ದಿನಾಂಕ: 06/03/2021

ಸಂಖ್ಯೆ: ವಾ-102/ವಾ.ಸ./ಸಭಾನಡವಳಿ-11/2020-21

## -:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 06/03/2021 ಶನಿವಾರದಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್-102 ವೃಷಭಾವತಿನಗರದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:-**

| ಕ್ರಮ ಸಂಖ್ಯೆ | ಹೆಸರು ಮತ್ತು ಪದನಾಮ |
|---|---|
| 1 | ಶ್ರೀ ಕೆ.ವಿಜಯ್ ಶೇಖರ್, ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ, ವಾರ್ಡ್-102 |
| 2 | ಶ್ರೀ ಜಿ.ಪ್ರಕಾಶ್, ಕಾರ್ಯದರ್ಶಿ ವಾರ್ಡ್ ಸಮಿತಿ ಮತ್ತು ಸಹಾಯಕ ಅಭಿಯಂತರರು, ವಾರ್ಡ್-102. |
| 3 | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-102 |
| 4 | ಶ್ರೀ ಎಸ್.ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, (ಗುತ್ತಿಗೆ) ವಾರ್ಡ್-102 |
| 5 | ಶ್ರೀ ಸಿದ್ದರಾಜು, ಸಹಾಯಕ ಅಭಿಯಂತರರು, ಬೆಸ್ಕಾಂ. |
| 6 | ಶ್ರೀ ಬಿ.ಕೆ. ಶಂಕರ್‌ರಾಜ್, ಸಹಾಯಕ ಅಭಿಯಂತರರು, ಬೆಸ್ಕಾಂ ಎನ್-3. |
| 7 | ಶ್ರೀ ಕೆ.ಹೆಚ್.ದಿನೇಶ್, ಬಿ.ಡಬ್ಲ್ಯೂ.ಎಸ್.ಎಸ್.ಬಿ. ವರ್ಕ್ ಇನ್ಸ್‌ಪೆಕ್ಟರ್. |
| 8 | ಶ್ರೀ ಮಹದೇವು, ಸ್ಯಾನಿಟರಿ ದಫೇದಾರರು, ವಾರ್ಡ್-102. |
| 9 | ಶ್ರೀ ನರಸಿಂಹ, ಮೇಸ್ತ್ರಿ, ಘನತ್ಯಾಜ್ಯ ನಿರ್ವಹಣಾ ವಿಭಾಗ, ವಾರ್ಡ್-102 |
| 10 | ಶ್ರೀ ರಾಜ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102 |
| 11 | ಶ್ರೀಮತಿ ಗೌರಮ್ಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102 |
| 12 | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102 |
| 13 | ಶ್ರೀ ಹೇಮಂತ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102 |

ಮು.ತಿ.ನೋ.

Scanned with CamScanner

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾಹಿತಿಗಳ ವಿವರಣೆ ನೀಡಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.
- ➢ ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ಚರ್ಚಿಸಿದಂತೆ ವಾರ್ಡ್ ವ್ಯಾಪ್ತಿಯಲ್ಲಿ 02 ಆಕ್ಟಿವ್ ಕೇಸ್‌ಗಳಿದ್ದು, ಅವರುಗಳು ಗುಣಮುಖರಾಗಿರುತ್ತಾರೆ. ತದನಂತರ ಹೊಸದಾಗಿ 08 ಆಕ್ಟಿವ್ ಕೇಸ್‌ಗಳಿದ್ದು, ಅದರಲ್ಲಿ 06 ಜನರನ್ನು ಹಾಸ್ಪಿಟಲೈಜ್ ಮತ್ತು 02 ಜನರನ್ನು ಹೋಮ್ ಕ್ವಾರಂಟೈನ್ ಮಾಡಲಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಕೋ-ವ್ಯಾಕ್ಸಿನೇಷನ್ ಲಸಿಕೆ ನೀಡುತ್ತಿರುವ ಬಗ್ಗೆ ಮಾಹಿತಿಗಳನ್ನು ವರದಿ ಮಾಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.
- ➢ ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಪ್ರಸ್ತುತವಾಗಿ ಸರ್ಕಾರಿ ನೌಕರರಿಗೆ ಲಸಿಕೆ ನೀಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಹಿರಿಯ ನಾಗರೀಕರಿಗೂ ಲಸಿಕೆ ನೀಡುವ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

2) **ಅಭಿಯಂತರರ ವಿಭಾಗದ ಬಗ್ಗೆ:-**

- ➢ ಶ್ರೀಮತಿ ಗೌರಮ್ಮ (ಸದಸ್ಯರು) ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಸಭೆಯಲ್ಲಿ ಕೋರಿದರು.
- ➢ ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ಸಿಸಿ ಕ್ಯಾಮೆರಾ ಅಳವಡಿಸುವ ಕಾಮಗಾರಿಗೆ ಅಂದಾಜುಪಟ್ಟಿಯನ್ನು ತಯಾರಿಸಲಾಗಿದ್ದು, ಸಕ್ಷಮ ಪ್ರಾಧೀಕಾರದ ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ. ಕಾಮಗಾರಿಗೆ ಟೆಂಡರ್ ಪ್ರಕ್ರಿಯೆಯಲ್ಲಿ ಗುತ್ತಿಗೆದಾರರ ನೇಮಕಗೊಂಡ ತಕ್ಷಣ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.
- ➢ ಶ್ರೀ ಹೇಮಂತ್ ಕುಮಾರ್ ರವರು ಮಾತನಾಡುತ್ತಾ, ಸರ್ಕಾರಿ ಶಾಲೆಯ ಆವರಣದಲ್ಲಿರುವ ಮರದಲ್ಲಿ ಜೇನುಗೂಡು ಕಟ್ಟಿದ್ದು, ಆದರಿಂದಾಗಿ ಶಾಲಾ ಮಕ್ಕಳಿಗೆ ಹಾಗೂ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ➢ ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ಸದರಿ ವಿಷಯವಾಗಿ ಅರಣ್ಯಾ ಇಲಾಖೆಯವರೊಂದಿಗೆ ಸ್ಥಳ ಪರಿಶೀಲಿಸಲಾಗಿದ್ದು, ಈಗಾಗಲೇ ಅರಣ್ಯಾ ಇಲಾಖೆಯವರು ಸದರಿ ಮರದಲ್ಲಿ ಜೇನು ಹುಳುಗಳನ್ನು ತೆರವುಗೊಳಿಸಿರುತ್ತಾರೆ. ಆದರೆ, ಮತ್ತೊಮ್ಮೆ ಅದೇ ಮರದ ಬೇರೊಂದು ರೆಂಬೆಗಳಲ್ಲಿ ಜೇನು ಹುಳುಗಳುಗಳು ಗೂಡು ಕಟ್ಟಿರುತ್ತವೆ. ಆದ್ದರಿಂದ ಇದನ್ನು ಶೀಘ್ರವಾಗಿ ಬಗೆಹರಿಸುವಂತೆ ಅರಣ್ಯಾ ಇಲಾಖೆಯವರಿಗೆ ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು.
- ➢ ಶ್ರೀಮತಿ ಪ್ರೇಮ ಮತ್ತು ಶ್ರೀಮತಿ ಗೌರಮ್ಮ ರವರು ಮಾತನಾಡುತ್ತಾ, 1ನೇ ಅಡ್ಡರಸ್ತೆ, 1ನೇ ಮುಖ್ಯರಸ್ತೆ ಹನುಮಹಾತ್ಮ ದೇವಸ್ಥಾನದ ಹತ್ತಿರ ಮತ್ತು ನಂಜಪ್ಪ ಲೇಔಟ್‌ನ ರಾಗಿ ಮಿಷನ್ ರಸ್ತೆಯಲ್ಲಿರುವ ಬೋರ್‌ವೆಲ್‌ಗಳನ್ನು ದುರಸ್ಥಿಗೊಳಿಸುವಂತೆ ಸಭೆಯಲ್ಲಿ ಕೋರಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಶೀಘ್ರವಾಗಿ ಸದರಿ ಸ್ಥಳವನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಹಾಯಕ ಅಭಿಯಂತರರಿಗೆ ತಿಳಿಸಿದರು.
- ➢ ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ಸದರಿ ಬೋರ್‌ವೆಲ್‌ಗಳ ವಿವರಗಳನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಬೋರ್‌ವೆಲ್‌ಗಳ ನಿರ್ವಹಣಾ ವಿಭಾಗದವಿಗೆ ಹಸ್ತಾಂತರಿಸಲಾಗಿರುತ್ತದೆ. ಇವುಗಳನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಬೋರ್‌ವೆಲ್‌ಗಳ ನಿರ್ವಹಣಾ ವಿಭಾಗದವರು ದುರಸ್ಥಿ ಕಾರ್ಯ ಕೈಗೊಳ್ಳುವಂತೆ ಸೂಚಿಸಲಾಗುವುದು ಎಂದು ಸಭೆಗೆ ತಿಳಿಸಿದರು.
- ➢ ಎಲ್ಲಾ ಸದಸ್ಯರು, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಡಾಂಬರು ರಸ್ತೆಗಳನ್ನು ಹೊಸದಾಗಿ ಡಾಂಬರೀಕರಣಗೊಳಿಸುವಂತೆ ಸಭೆಯಲ್ಲಿ ಕೋರಿದರು.

ಮು.ತಿ.ನೋ.

Scanned with CamScanner

- ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ಡಾಂಬರೀಕರಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಕೆಲವು ರಸ್ತೆಗಳಲ್ಲಿ ಬೆಸ್ಕಾಂ ಇಲಾಖೆಯ ವತಿಯಿಂದ ಯು.ಜಿ. ಕೇಬಲ್ ಅಳವಡಿಸು ಕಾಮಗಾರಿಯು ಚಾಲ್ತಿಯಲ್ಲಿರುತ್ತದೆ. ಸದರಿ ಕಾಮಗಾರಿಯು ಪೂರ್ಣಗೊಂಡ ನಂತರ ಬಿಬಿಎಂಪಿ ವತಿಯಿಂದ ಉಳಿದ ರಸ್ತೆಗಳಿಗೆ ಡಾಂಬರೀಕರಣ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.
- ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಹಾಗೂ ಚರಂಡಿಗಳ ಮೇಲ್ಭಾಗದಲ್ಲಿ ಸಾರ್ವಜನಿಕರು ಹಾಕಿರುವ ಕಟ್ಟಡದ ಅವಶೇಷಗಳು ಹಾಗೂ ಡೆಬ್ರಿಸ್‌ಗಳನ್ನು ಗ್ಯಾಂಗ್‌ಮನ್‌ಗಳು ಮತ್ತು ಟ್ರಾಕ್ಟರ್‌ಗಳ ಸಹಯೋಗದೊಂದಿಗೆ ಕಾಲಕಾಲಕ್ಕೆ ತೆರವುಗೊಳಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ ಎಂದು ಸಭೆಗೆ ತಿಳಿಸಿದರು.

3) <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀಮತಿ ಪ್ರೇಮ ಮತ್ತು ಗೌರಮ್ಮ ರವರು ಮಾತನಾಡುತ್ತಾ, ನಂಜಪ್ಪ ಬಡಾವಣೆಯ 13ನೇ ಅಡ್ಡರಸ್ತೆಯಲ್ಲಿ ಕಸವನ್ನು ರಸ್ತೆಗೆ ಬಿಸಾಡುತ್ತಿದ್ದಾರೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಂಡು ಶೀಘ್ರವಾಗಿ ಸಮಸ್ಯೆಯನ್ನು ಬಗೆಹರಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.
- ಶ್ರೀಹೇಮಂತ್, ಪ್ರೇಮ ಹಾಗೂ ದೇವರಾಜು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಹಾಗೂ ಖಾಲಿ ನಿವೇಶನಗಳಲ್ಲಿ ಕಸಗಳು ಹೆಚ್ಚಾಗಿ ಬೀಳುತ್ತಿದ್ದು, ಶೀಘ್ರವಾಗಿ ಬಗೆಹರಿಸುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ಬಾಬು ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಕಸದ ಪಾಯಿಂಟ್‌ಗಳಲ್ಲಿ ಕಸ ಹಾಕದಂತೆ ಸೂಚಿಸಿ ಎಚ್ಚರಿಕೆ ಗೋಡೆ ಬರಹವನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.

4) <u>ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-</u>

- ಶ್ರೀ ಹೇಮಂತ್, ಸದಸ್ಯರು ರವರು ಮಾತನಾಡುತ್ತಾ, ಕಳೆದ ಒಂದು ವಾರದಿಂದ 3ನೇ ಅಡ್ಡರಸ್ತೆ, 4ನೇ ಮುಖ್ಯರಸ್ತೆ ಎನ್.ಜಿ.ಓ.'ಸ್ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿದ್ದು, ಕೂಡಲೇ ಬಗೆಹರಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಸಭೆಯಲ್ಲಿ ಹಾಜರಿದ್ದ ಶ್ರೀ ಕೆ.ಹೆಚ್.ದಿನೇಶ್, ಬಿ.ಡಬ್ಲ್ಯೂ.ಎಸ್.ಎಸ್.ಬಿ. ವರ್ಕ್ ಇನ್ಸ್‌ಪೆಕ್ಟರ್ ರವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಶೀಘ್ರವಾಗಿ ಬಗೆಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀ ಹೇಮಂತ್, ಸದಸ್ಯರು ರವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ಚರ್ಚಿಸಿದಂತೆ 4ನೇ ಮುಖ್ಯರಸ್ತೆ ಎನ್.ಜಿ.ಓ.'ಸ್ ಕಾಲೋನಿಯಲ್ಲಿ ಮ್ಯಾನ್‌ಹೋಲ್‌ಗಳನ್ನು ರಸ್ತೆಯ ಮಟ್ಟಕ್ಕೆ ಎತ್ತರಿಸುವಂತೆ ತಿಳಿಸಲಾಗಿತ್ತು, ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಮ್ಯಾನ್‌ಹೋಲ್‌ಗಳನ್ನು ಎತ್ತರಿಸಲಾಗಿದ್ದು, ಸದರಿ ಕಾಮಗಾರಿಯ ಡೆಬ್ರಿಸ್‌ಗಳನ್ನು ತೆರವುಗೊಳಿಸದೇ ಹಾಗೇ ಬಿಟ್ಟಿರುತ್ತಾರೆ. ಅದನ್ನು ತೆರವುಗೊಳಿಸುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಕೆ.ಹೆಚ್.ದಿನೇಶ್, ಬಿ.ಡಬ್ಲ್ಯೂ.ಎಸ್.ಎಸ್.ಬಿ. ವರ್ಕ್ ಇನ್ಸ್‌ಪೆಕ್ಟರ್ ರವರು ಮಾತನಾಡುತ್ತಾ, ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಕೂಡಲೇ ಬಗೆಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು.

5) <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ರಸ್ತೆಗಳಲ್ಲಿ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಯು ವಿಳಂಬವಾಗಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ಅನಾನುಕೂಲವಾಗಿದ್ದು, ಇದನ್ನು ತುರ್ತಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸಿದ್ದರಾಜು ಸಹಾಯಕ ಅಭಿಯಂತರರು ಬೆಸ್ಕಾಂ ರವರಿಗೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಸಿದ್ದರಾಜು ಸಹಾಯಕ ಅಭಿಯಂತರರು ರವರು ಮಾತನಾಡುತ್ತಾ, ಯು.ಜಿ. ಕೇಬಲ್ ಅಳವಡಿಸುವ ಗುತ್ತಿಗೆದಾರರಿಗೆ ಶೀಘ್ರವಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

ಮು.ತಿ.ನೋ.

Scanned with CamScanner

6) **ಪೊಲೀಸ್ ವಿಭಾಗದ ಬಗ್ಗೆ:-**

- ಎಲ್ಲಾ ಸದಸ್ಯರು ಮಾತನಾಡುತ್ತಾ, ಸಣ್ಣಕ್ಕಿ ಬಯಲು, ತೋಟದ ರಸ್ತೆಗಳಲ್ಲಿ ಕೆಲವು ಹುಡುಗರು ಅನಾವಶ್ಯಕವಾಗಿ ಮೋಟಾರ್ ಬೈಕ್‌ಗಳಲ್ಲಿ ಅತೀ ವೇಗವಾಗಿ ವಾಹನ ಚಲಾಯಿಸುವುದು ಹಾಗೂ ದುಷ್ಕೃತ್ಯಗಳಲ್ಲಿ ತೊಡಗುತ್ತಿರುವುದು ಕಂಡುಬಂದಿರುತ್ತದೆ. ಆದುದರಿಂದ ಹೊಯ್ಸಳ ಗಸ್ತು ವಾಹನವು ಹಾಗೂ ಚೀತ ಮೋಟಾರ್ ಸೈಕಲ್ ವಾಹನಗಳಲ್ಲಿ ಹೆಚ್ಚಾಗಿ ಗಸ್ತು ತಿರುಗಲು ಕ್ರಮವಹಿಸುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ವಿಷಯವಾಗಿ ಪೊಲೀಸ್ ಅಧಿಕಾರಿಯವರಿಗೆ ತಿಳಿಸಿ ರಾತ್ರಿ ವೇಳೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಾಗಿ ಗಸ್ತು ತಿರುಗುವಂತೆ ಸಭಾ ಕಾರ್ಯದರ್ಶಿಯವರಿಗೆ ಸಭೆಯಲ್ಲಿ ಸೂಚಿಸಿದರು.

ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ನೋಡಲ್ ಅಧಿಕಾರಿಯವರು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ-102

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್-102

ಪ್ರತಿಯನ್ನು :-

1) ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2) ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3) ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4) ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5) ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6) ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7) ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8) ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9) ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12) ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15) ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16) ಕಛೇರಿಯ ಕಡತಕ್ಕೆ.

Scanned with CamScanner

ವಾರ್ಡ್ ಸಂಖ್ಯೆ-102 ವೃಷಭಾವತಿನಗರ

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 06/03/2021 ರಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಹಾಗೂ RWAs ಸದಸ್ಯರುಗಳ ಹಾಜರಾತಿ ತೆಗೆದುಕೊಳ್ಳಲಾಗಿರುತ್ತದೆ.

| ಕ್ರಮ ಸಂಖ್ಯೆ | ಹೆಸರು | ಪದನಾಮ ಇಲಾಖೆ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 1) | ವಿಜಯಶೇಖರ್ | ನೋಡಲ್ ಅಧಿಕಾರಿ RO | 9448670084 | [signature] 6/3/2021 |
| 2) | ಪ್ರಕಾಶ್.ಜಿ | ಕಾರ್ಯದರ್ಶಿ AE, w-102 | 9845236847 | [signature] 6/3/2021 |
| 3) | ಗೋವಿಂದರಾಜುಲು | SHI | 9845512187 | G. L. [signature] |
| 4) | ಟಿ.ಆರ್.ಮಂಜುನಾಥ್ | T.I | 9743557879 | |
| 5) | ಸಿದ್ದರಾಜು | AE(elec Bescom) | 9449870177 | [signature] |
| 6) | ರಕ್ಷಿತ್ | Marshal | 938088848 | |
| 7) | ಬಾಬು | JHI, w-102 | 9632549664 | S. Babu |
| 8) | ಶಿವಪ್ಪ.ಬಿ. | ಅಧ್ಯಕ್ಷರು | 8095353731 | |
| 9) | ಚಂದ್ರಪ್ಪ | RWA | 9845763281 | |
| 10) | ದೇವರಾಜು | RWA | 9632584986 | |
| 11) | ರಂಗನಾಥ್.C | —\|\|— | 9341199998 | |
| 12) | ಸಿದ್ದಗಂಗಪ್ಪ | —\|\|— | 990239918 | |

Scanned with CamScanner

| | | | |
|---|---|---|---|
| 13) ಶ್ರೀಲತಾ | RWA | 9632728915 | Prem... |
| 14) ಗೌರಮ್ಮ | —॥— | 9740849333 | K. Gowri |
| 15) ಹೇಮಂತಕುಮಾರ್ | —॥— | 9448362208 | [signature] |
| 16) ರಾಜ್‌ಕುಮಾರ್ | —॥— | 8553779344 | [signature] |
| 17) ಪ್ರಶಾಂತ್. ಬಿ.ಆರ್ | —॥— | 9741912644 | |
| 18) ತಿಮ್ಮರಾಯಪ್ಪ | Street Light | 9740378835 | |
| 19) ರಂಗನಾಥ್ | AEE, Nagapura | 9480685316 | |
| 20) ಕೆ.ಎಸ್. ದಿನೇಶ್ | BWSSB | 9945421088 | [signature] |
| 21) K.V. ಲೋಕೇಶ್ | Veternary | 9480683056 | |
| 22) ರಾಜೇಶ್ | T.I | 7411692135 | |
| 23 [illegible] | [illegible] | 9449870128 | [signature] |
| 24. ಮಹದೇವಪ್ಪ | [illegible] | 9141934024 | [signature] |
| 25) ನರಸಿಂಹ | [illegible] | 9741970015 | ನರಸಿಂಹ |

Scanned with CamScanner